ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಡಾ|| ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಆರ್ಥಿಕ ನೆರವು ನೀಡಿರುವ ಬಗ್ಗೆ

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) -

1095 (1212) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಮನಗರ ಜಿಲ್ಲೆಯ ಡಾ|| ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ನಿರುದ್ಯೋಗಿ ಯುವಕರಿಗೆ ಕುರಿ, ಕೋಳಿ ಸಾಕಣೆ, ಹೈನುಗಾರಿಕೆ ಮೊದಲಾದ ಸ್ವಯಂ ಉದ್ಯೋಗ ಕೈಗೊಳ್ಳಲು ನಿಗಮದಿಂದ ಹಣಕಾಸು ನೆರವು ನೀಡಲಾಗಿದೆ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಇದಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಎಷ್ಟು ಅನುದಾನವನ್ನು ಬಿಡುಗಡೆ ಮಾಡಿರುತ್ತವೆ; (ಪ್ರತಿ ವರ್ಷದ ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಬಳಕೆಯಾದ ಅನುದಾನ ಎಷ್ಟು; ಯಾವ ಯಾವ ಉದ್ದೇಶಗಳಿಗೆ ಹಾಗೂ ಯಾರು ಯಾರಿಗೆ ನೀಡಲಾಗಿದೆ;

(ಈ) 2018-19ನೇ ಸಾಲಿನಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ಹಣಕಾಸು ನೆರವನ್ನು ವರ್ಗಾಯಿಸಲಾಗಿದೆ? (ಪೂರ್ಣ ವಿಳಾಸ ಹಾಗೂ ಸಲ್ಲಿಸಿದ ದಾಖಲೆಗಳೊಂದಿಗೆ ವಿವರವನ್ನು ನೀಡುವುದು)